ದಿನಾಂಕ: 03.04.2021ರಂದು ಮಧ್ಯಾಹ್ನ 3.00 ಗಂಟೆಗೆ ಶಿವನಗರ ವಾರ್ಡ್ ನಂ. 107 ರಲ್ಲಿ ನೋಡಲ್ ಅಧಿಕಾರಿಯವರಾದ ಶ್ರೀ ಲಿಂಗಣ್ಣ ಗುಂಡಳ್ಳಿ, ರವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯ ನಡುವಳಿಗಳ ವಿವರ:-

**ಹಾಜರಿದ್ದ ಪಾಲಿಕೆಯ ಅಧಿಕಾರಿಗಳು:-**

1. ಶ್ರೀ ಸೋಮಶೇಖರ್.ಜಿ.ಎಲ್ ಸಹಾಯಕ ಅಭಿಯಂತರರು, ವಾರ್ಡ್ ನಂ. 107 ಶಿವನಗರ
2. ಶ್ರೀ ನಾಗರಾಜ್, ಸಹಾಯಕ ಅಭಿಯಂತರರು , ಬಿ.ಡಬ್ಲ್ಯೂ.ಎಸ್.ಎಸ್.ಬಿ
3. ಶ್ರೀ ಹರೀಶ್‌ನಾಯಕ್, ಸಹಾಯಕ ಅಭಿಯಂತರರು , ಬಿ.ಡಬ್ಲ್ಯೂ.ಎಸ್.ಎಸ್.ಬಿ
4. ಶ್ರೀ ಆನಂದ್, ಸಹಾಯಕ ಅಭಿಯಂತರರು , ಬೆಸ್ಕಾಂ
5. ಶ್ರೀ ಶಿವಕುಮಾರ್, ಹಿರಿಯ ಆರೋಗ್ಯ ಪರಿವೀಕ್ಷಕರು
6. ಶ್ರೀ ಹನಿಕೇಶ್, ಕಿರಿಯ ಆರೋಗ್ಯ ಪರಿವೀಕ್ಷಕರು
7. ಶ್ರೀ ಶರಣಬಸವ, ಮಾರ್ಷಲ್

ಶ್ರೀ ಸೋಮಶೇಖರ್.ಜಿ.ಎಲ್. ಕಾರ್ಯದರ್ಶಿಗಳು ಹಾಗೂ ಸಂಚಾಲಕರು, ವಾರ್ಡ್ ನಂ. 107ರವರು ಸಭೆಗೆ ಆಗಮಿಸಿರುವ ಎಲ್ಲರಿಗೂ ಸ್ವಾಗತ ಕೋರುತ್ತಾ, ಈ ಕೆಳಗಿನ ಅಂಶಗಳನ್ನು ಸಭೆಯಲ್ಲಿ ಚರ್ಚಿಸಲಾಯಿತು.

1. ಶ್ರೀ ಶಿವಕುಮಾರ್, ಹಿರಿಯ ಆರೋಗ್ಯ ಪರಿವೀಕ್ಷಕರು ಮಾತನಾಡುತ್ತಾ, ವಾರ್ಡಿನಲ್ಲಿ ಕರೋನಾ ಬಂದಿರುವ ರೋಗಿಗಳ ಸಂಖ್ಯೆ ದಿನದಿಂದ ದಿನಕ್ಕೆ ಹೆಚ್ಚಾಗುತ್ತಿರುವುದರಿಂದ ವಾರ್ಡ್ ಕಮಿಟಿ ಸದಸ್ಯರುಗಳು ತಮ್ಮ ಸುತ್ತ ಮುತ್ತ ಇರುವ ನಿವಾಸಿಗಳಿಗೆ ಮಾಸ್ಕ್ ಹಾಗೂ ಸ್ಯಾನಿಟೈಸರ್ ಬಳಸಿಕೊಳ್ಳಲು ಜಾಗೃತಿ ಮೂಡಿಸಬೇಕೆಂದು ಸಭೆಯಲ್ಲಿ ಸೂಚಿಸಿದರು.
2. ಶ್ರೀ ಶಿವಕುಮಾರ್, ಹಿರಿಯ ಆರೋಗ್ಯ ಪರಿವೀಕ್ಷಕರು ಮಾತನಾಡುತ್ತಾ, 2-3 ದಿನಗಳಲ್ಲಿ ವಾರ್ಡಿನ ಪ್ರಮುಖ ಸ್ಥಳಗಳಲ್ಲಿ ಕೋವಿಡ್ ಲಸಿಕೆಯನ್ನು ನೀಡಲು ಕ್ರಮ ಕೈಗೊಳ್ಳಲಾಗುತ್ತಿದ್ದು, ಸದರಿ ಸ್ಥಳಗಳ ಪಟ್ಟಿಯನ್ನು ಚರ್ಚಿಸಿ ಸಾರ್ವಜನಿಕರಿಗೆ ನೀಡಲಾಗುವುದೆಂದು ತಿಳಿಸಿದರು.
3. ನೋಡಲ್ ಅಧಿಕಾರಿಗಳು ಮಾತನಾಡುತ್ತಾ, 1ನೇ ಮುಖ್ಯ ರಸ್ತೆ, ಮಹಾಗಣಪತಿನಗರ ಇಲ್ಲಿ ಬರುವ ಗುಜರಿ ಅಂಗಡಿಯವರು ಖರೀದಿಸಿರುವ ಎಲ್ಲಾ ಹಳೆಯ ವಸ್ತುಗಳನ್ನು ಪಾದಚಾರಿ ಮಾರ್ಗದಲ್ಲಿ ಹಾಕಿರುವುದರಿಂದ ಸಾರ್ವಜನಿಕರಿಗೆ ಹಾಗೂ ವಾಹನ ಸವಾರರಿಗೆ ಓಡಾಡಲು ತೊಂದರೆಯಾಗುತ್ತಿದೆ ಎಂದು ಸಭೆಯಲ್ಲಿ ತಿಳಿಸಿದರು. ಮತ್ತು ಸದರಿ ಸ್ಥಳವನ್ನು ಹಿರಿಯ ಆರೋಗ್ಯ ಪರಿವೀಕ್ಷಕರು ಪರಿಶೀಲಿಸಿ ದಂಡ ವಿಧಿಸುವಂತೆ ಸೂಚಿಸಿದರು.
4. 4ನೇ ಮುಖ್ಯ ರಸ್ತೆ, ಮಹಾಗಣಪತಿನಗರ ಇಲ್ಲಿ 2 ಮನೆಗಳಿಗೆ ಕಾವೇರಿ ನೀರು ಸರಿಯಾಗಿ ಬರದೇ ಇರುವುದರಿಂದ ಸದರಿ ರಸ್ತೆಯಲ್ಲಿರುವ ಕೊಳವೆ ಬಾವಿಯ ನೀರಿನ ಸಂಪರ್ಕವನ್ನು ನೀಡಬೇಕೆಂದು ಸಭೆಯಲ್ಲಿ ಹಾಜರಿದ್ದ ಸ್ಥಳೀಯ ನಿವಾಸಿಗಳು ಕೋರಿದರು. ಇದರ ಬಗ್ಗೆ ನೋಡಲ್ ಅಧಿಕಾರಿಗಳು ಮಾತನಾಡುತ್ತಾ, ಪರಿಶೀಲಿಸಿ ಕ್ರಮ ವಹಿಸಲು ವಾರ್ಡ್ ಸಹಾಯಕ ಅಭಿಯಂತರರಿಗೆ ತಿಳಿಸಿದರು.
5. ವಾರ್ಡ್ ಕಿರಿಯ ಆರೋಗ್ಯ ಪರಿವೀಕ್ಷಕರು ಮಾತನಾಡುತ್ತಾ, ಪಶ್ಚಿಮ ಕಾರ್ಡ್ ರಸ್ತೆಯ ಮೇಲು ಸೇತುವೆ ಕೆಳಗೆ ಘನ ತ್ಯಾಜ್ಯ ಸಾಗಿಸುವ ಲಾರಿಗಳನ್ನು ನಿಲ್ಲಿಸಲು ಸ್ಥಳೀಯ ನಿವಾಸಿಗಳು ತೊಂದರೆ ಮಾಡುತ್ತಿರುವುದರಿಂದ ಲಾರಿಗಳು ನಿಲ್ಲುವ ಸ್ಥಳವನ್ನು ಶೀಟ್‌ನಿಂದ ಮುಚ್ಚಬೇಕೆಂದು ಸಭೆಯಲ್ಲಿ ಕೋರಿದರು. ಈ ಬಗ್ಗೆ ಪರಿಶೀಲಿಸಿ ಕ್ರಮ ಕೈಗೊಳ್ಳಲಾಗುವುದೆಂದು ಸಭೆಯಲ್ಲಿ ತಿಳಿಸಿದರು.

ಪು.ತಿ.ನೋ.

Scanned by CamScanner

6. ಸಹಾಯಕ ಅಭಿಯಂತರರು ಬಿ.ಡಬ್ಲ್ಯೂ.ಎಸ್.ಎಸ್.ಬಿ. ರವರು ಮಾತನಾಡುತ್ತಾ, 11ನೇ ಮುಖ್ಯ ರಸ್ತೆ, ಶಿವನಗರ ಹಾಗೂ 7ನೇ ಮುಖ್ಯ ರಸ್ತೆ, ಮಹಾಗಣಪತಿನಗರದಲ್ಲಿ ನೀರಿನ ಸಮಸ್ಯೆ ಇರುವುದರಿಂದ ಪಾಲಿಕೆಯ ವತಿಯಿಂದ ಅನುದಾನ ಲಭ್ಯವಿದ್ದಲ್ಲಿ ಸದರಿ ಸ್ಥಳಗಳಲ್ಲಿ ಬೋರ್‌ವೆಲ್ ಕೊರೆಸಿಕೊಡಬೇಕೆಂದು ಸಭೆಯಲ್ಲಿ ಕೋರಿದರು. ಇದರ ಬಗ್ಗೆ ನೋಡಲ್ ಅಧಿಕಾರಿಗಳು ಮಾತನಾಡುತ್ತಾ, ಪರಿಶೀಲಿಸಿ ಕ್ರಮ ಕೈಗೊಳ್ಳುವಂತೆ ವಾರ್ಡ್ ಸಹಾಯಕ ಅಭಿಯಂತರರಿಗೆ ತಿಳಿಸಿದರು.

ಎಲ್ಲಾ ಇಲಾಖೆಗಳಿಗೆ ಸಂಬಂಧಿಸಿದಂತೆ ಸಭೆಯಲ್ಲಿ ತಿಳಿಸುವ ದೂರುಗಳನ್ನು ಸರಿಪಡಿಸಿ, ಮುಂದಿನ ಸಭೆಯಲ್ಲಿ ವರದಿಯನ್ನು ನೀಡುವಂತೆ, ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಕಾರ್ಯದರ್ಶಿ
ವಾರ್ಡ್ ಸಮಿತಿ
ವಾರ್ಡ್ ನಂ. 107

ಸಹಿ/-
ಶ್ರೀ ಲಿಂಗಣ್ಣ ಗುಂಡಳ್ಳಿ
ನೋಡಲ್ ಅಧಿಕಾರಿಗಳು
ವಾರ್ಡ್ ನಂ. 107

**ಪ್ರತಿಯನ್ನು:**

1. ಮಾನ್ಯ ಜಂಟಿ ಆಯುಕ್ತರು [ಪಶ್ಚಿಮ] ಬಿ.ಬಿ.ಎಂ.ಪಿ. ರವರ ಅವಗಾಹನೆಗಾಗಿ ಸಲ್ಲಿಸಿದೆ.
2. ಮುಖ್ಯ ಅಭಿಯಂತರರು [ಪಶ್ಚಿಮ] ಬಿ.ಬಿ.ಎಂ.ಪಿ. ರವರ ಅವಗಾಹನೆಗಾಗಿ ಸಲ್ಲಿಸಿದೆ.
3. ಆರೋಗ್ಯ ವೈದ್ಯಾಧಿಕಾರಿಗಳು [ಪಶ್ಚಿಮ] ಬಿ.ಬಿ.ಎಂ.ಪಿ. ರವರ ಮಾಹಿತಿಗಾಗಿ ಸಲ್ಲಿಸಿದೆ.
4. ಕಾರ್ಯಪಾಲಕ ಅಭಿಯಂತರರು , ರಾಜಾಜಿನಗರ ವಿಭಾಗ/ಯೋಜನೆ ವಿಭಾಗ ರವರ ಮಾಹಿತಿಗಾಗಿ ಸಲ್ಲಿಸಿದೆ.
5. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು [ಘನತ್ಯಾಜ್ಯ] ರಾಜಾಜಿನಗರ ವಿಭಾಗ ರವರ ಮಾಹಿತಿಗಾಗಿ ಸಲ್ಲಿಸಿದೆ.
6. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು [ಬಿ.ಡಬ್ಲ್ಯೂ.ಎಸ್.ಎಸ್.ಬಿ.] ಬೆಂಗಳೂರು ರವರ ಮಾಹಿತಿಗಾಗಿ ಸಲ್ಲಿಸಿದೆ.
7. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಬೀದಿ ದೀಪಗಳ ನಿರ್ವಹಣೆ, ಬೆಂಗಳೂರು ರವರ ಮಾಹಿತಿಗಾಗಿ ಸಲ್ಲಿಸಿದೆ.
8. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು [ಬೆಸ್ಕಾಂ] ಉಪವಿಭಾಗ ಬೆಂಗಳೂರು ರವರ ಮಾಹಿತಿಗಾಗಿ ಸಲ್ಲಿಸಿದೆ
9. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು [ರಸ್ತೆ ಮತ್ತು ಮೂಲ ಭೂತ ಸೌಕರ್ಯ,] ಬೆಂಗಳೂರು ರವರ ಮಾಹಿತಿಗಾಗಿ ಸಲ್ಲಿಸಿದೆ
10. ಕಲ್ಯಾಣ ಅಧಿಕಾರಿ, ಪಶ್ಚಿಮ ವಲಯ, ಬಿ.ಬಿ.ಎಂ.ಪಿ. ರವರ ಮಾಹಿತಿಗಾಗಿ ಸಲ್ಲಿಸಿದೆ.
11. ಸಂಚಾರಿ ಪೋಲಿಸ್ ಠಾಣೆ, ರಾಜಾಜಿನಗರ/ವಿಜಯನಗರ ರವರ ಮಾಹಿತಿಗಾಗಿ ಸಲ್ಲಿಸಿದೆ.
12. ಪೋಲಿಸ್ ಠಾಣೆ, ರಾಜಾಜಿನಗರ/ಬಸವೇಶ್ವರನಗರ, ರವರ ಮಾಹಿತಿಗಾಗಿ ಸಲ್ಲಿಸಿದೆ.
13. ಅರಣ್ಯಾಧಿಕಾರಿ, ಬಿ.ಬಿ.ಎಂ.ಪಿ. ಪಶ್ಚಿಮ ರವರ ಮಾಹಿತಿಗಾಗಿ ಸಲ್ಲಿಸಿದೆ.

Scanned by CamScanner